PW-1 ಹೆಚ್ ಮಂಜಪ್ಪ

Date:27.10.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಆರ್ ಎಸ್ ಪಿ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಿನಾಂಕ 08.10.2013 ರಂದು ಬರೆದುಕೊಟ್ಟ ಕ್ರಯ ಕರಾರು ಪತ್ರವನ್ನು ನಿಪಿ 1 ಎಂದು ಗುರುತಿಸಲಾಯಿತು. ನಿಪಿ 1 ರಲ್ಲಿಯ ಸಾಕ್ಷಿಯ 3 ಸಹಿಗಳನ್ನು ಒಟ್ಟಾಗಿ ನಿಪಿ 1ಎ ಎಂದು ಗುರುತಿಸಲಾಯಿತು. ಸದರಿ ಪತ್ರದಲ್ಲಿರುವ 1ನೇ ಪ್ರತಿವಾದಿಯ 3 ಸಹಿಗಳನ್ನು ಸಾಕ್ಷಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ 1ಬಿ ಎಂದು ಗುರುತಿಸಲಾಯಿತು. ಸದರಿ ಪತ್ರಕ್ಕೆ ಸಿ ರಾಘವೇಂದ್ರ ಚಕ್ರವರ್ತಿ, ಮಲ್ಲಿಕಾರ್ಜುನ, ರಾಜಣ್ಣ ಮತ್ತು ಪ್ರಕಾಶ ರವರು ಸಹಿಯನ್ನು ಮಾಡಿರುತ್ತಾರೆ. ಸದರಿ ಸಹಿಗಳನ್ನು ಕ್ರಮವಾಗಿ ನಿಪಿ 1ಸಿ ರಿಂದ 1ಎಫ್ ಎಂದು ಗುರುತಿಸಲಾಯಿತು. ಸದರಿ ಪತ್ರವನ್ನು ರುದ್ರಸ್ವಾಮಿ ರವರು ತಯಾರಿಸಿರುತ್ತಾರೆ. ಸಾಕ್ಷಿ ಗುರುತಿಸಿದ ರುದ್ರ ಸ್ವಾಮಿ ರವರ ಸಹಿಯನ್ನು 1ಜಿ ಎಂದು ಗುರುತಿಸಲಾಯಿತು. ಸದರಿ ಪತ್ರಕ್ಕೆ ಇನ್ನೋರ್ವ ಮಾಲೀಕರಾದ ನಾರಾಯಣ ಸ್ವಾಮಿ ರವರು ಕೂಡ ಸಹಿ ಮಾಡಿರುತ್ತಾರೆ. ಸದರಿ ನಾರಾಯಣ ರವರ ಸಹಿಯನ್ನು 1ಹೆಚ್ ಎಂದು ಗುರುತಿಸಲಾಯಿತು. ಪ್ರತಿವಾದಿಗೆ ಕಳುಹಿಸಿದ ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ 2 ಎಂದು ಅದಕ್ಕೆ ಸಂಬಂದಿಸಿದ ಅಂಚೆ ರಸೀದಿಗಳನ್ನು ನಿಪಿ 3 ಎಂದು ಮತ್ತು ಅಂಚೆ ಸ್ವೀಕೃತಿ ಪತ್ರವನ್ನು ನಿಪಿ 4 ಎಂದು ಗುರುತಿಸಲಾಯಿತು. 1ನೇ ಪ್ರತಿವಾದಿ ನೀಡಿದ ಉತ್ತರವನ್ನು ನಿಪಿ 5 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂದಿಸಿದ ಎರಡು ಪಹಣಿ ಪತ್ರಿಕೆಯನ್ನು ಒಟ್ಟಾಗಿ ನಿಪಿ 6 ಎಂದು ಗುರುತಿಸಲಾಯಿತು. ದಿನಾಂಕ 17.03.2021 ರ ಕ್ರಯ ಕರಾರು ಪತ್ರದ ಅನ್ ಲೈನ್ ಪ್ರತಿಯನ್ನು ನಿಪಿ 7 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).                     ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ